ಕರ್ನಾಟಕ ಸರ್ಕಾರ

(ಕಂದಾಯ ಇಲಾಖೆ)

ತಹಶೀಲ್ದಾರರವರ ನ್ಯಾಯಾಲಯ ಕೂಡ್ಲಿಗಿ

ಸಂ/ಕಂ/ಪಹಣಿ:ವಿವಾದ/09/2015-16. ದಿನಾಂಕ: 03-08-2016.

| ವಾದಿಗಳು | ಪ್ರತಿವಾದಿಗಳು |
|---|---|
| 1)ಕುಡತಿನಿ ಹನುಮಪ್ಪ ತಂದೆ ಲೇಟ್ ಕುಡತಿನಿ ಬಸಪ್ಪ<br>2)ಬಸಮ್ಮ ಗಂಡ ಲೇಟ್ ಕುಡತಿನಿ ದುರುಗಪ್ಪ<br>ಹಿರೇಹೆಗ್ಡಾಳ್ ಗ್ರಾಮ<br>ಕೂಡ್ಲಿಗಿ ತಾಲೂಕು | ಬ್ಯಾಸ್ತೇರಿ ದುರುಗಪ್ಪ ತಾಯಿ ಪಕ್ಕೀರಮ್ಮ<br>ಹಿರೇಹೆಗ್ಡಾಳ್ ಗ್ರಾಮ<br>ಕೂಡ್ಲಿಗಿ ತಾಲೂಕು |
| ಕೂಡ್ಲಿಗಿ ತಾಲೂಕು ಹಿರೇಹೆಗ್ಡಾಳ್ ಗ್ರಾಮದ ಸನಂ 5/ಎ. ವಿಸ್ತೀರ್ಣ 6-44.ಎಕ್ರೆ ಜಮೀನನ್ನು ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಹಿರೇಹೆಗ್ಡಾಳ್ ಗ್ರಾಮದ ಸನಂ 5/ಎ. ವಿಸ್ತೀರ್ಣ 6-44 .ಎಕ್ರೆ ಜಮೀನನ್ನು ಸದರಿ ಗ್ರಾಮದ ಕುಡತಿನಿ ಹನುಮಪ್ಪ ತಂದೆ ಲೇಟ್ ಕುಡತಿನಿ ಬಸಪ್ಪ ಇವರು ದಿನಾಂಕ 25-02-2013 ರ ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಹಿರೇಹೆಗ್ಡಾಳ್ ಇವರು ನಮೂನೆ-21 ರ ನೋಟಿಸನ್ನು ದಿನಾಂಕ 26-12-2014 ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಸದರಿ ಗ್ರಾಮದ ಬ್ಯಾಸ್ತೇರಿ ದುರುಗಪ್ಪ ತಾಯಿ ಪಕ್ಕೀರಮ್ಮ ಇವರು ತಕರಾರು ಅರ್ಜಿ ಸಲ್ಲಿಸಿರುವ ಕಾರಣ ಈ ಪ್ರಕರಣದ ಎಂ.ಆರ್.ನಂಬರ್: 21/2014-15. ದಿನಾಂಕ 27-01-2015 ರಲ್ಲಿ ವಿವಾದಾಸ್ಪದ ಪ್ರಕರಣವೆಂದು ಪರಿಗಣಿಸಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 11-03-2015 ರಿಂದ 03-08-2016. ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಮತ್ತು ತಕರಾರುದಾರರು ಹಾಗೂ ಅವರ ಪರ ನ್ಯಾಯಾವಾದಿಗಳು ಹಾಜರಾಗಿರುತ್ತಾರೆ. ಅರ್ಜಿದಾರರು ಹಿರೇಹೆಗ್ಡಾಳ್ ಗ್ರಾಮದ ಸನಂ 5/ಎ. ವಿಸ್ತೀರ್ಣ 6-44.ಎಕ್ರೆ ಜಮೀನು ನನ್ನ ಹೆಸರಲ್ಲಿ ಲೆಕ್ಕ ದಾಖಲೆ ಪಟ್ಟಾ ಇರುತ್ತದೆ. ನಾವುಗಳು ಸದರಿ ಜಮೀನನ್ನು ದಿನಾಂಕ 25-02-2013 ರಂದು ಪಾಲು ವಿಭಾಗದ ಪತ್ರ ಬರೆಯಿಸಿ ಅದರ ಪ್ರಕಾರ ಅಳತೆ ಮಾಡಿಸಿ 11ಇ. ನಕ್ಷೇಯನ್ನು ಪಡೆದಿರುತ್ತೇವೆ. ಕಾರಣ ಸದರಿ ಪಾಲು ವಿಭಾಗದ ಪತ್ರ ಹಾಗೂ 11ಇ. ನಕ್ಷೇ ಪ್ರಕಾರ ನಮ್ಮಗಳ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಬೇಕೆಂದು ಕೋರಿರುತ್ತಾರೆ.

ವಿಚಾರಣೆಯಲ್ಲಿ ತಕರಾರುದಾರರ ಪರ ನ್ಯಾಯಾವಾದಿಗಳು ಹಾಜರಾಗಿದ್ದು ಸದರಿ ವಿವಾದಿತ ಜಮೀನಿನ ಮೂಲತಹ ಸರ್ಕಾರಿ ಜಮೀನು ಆಗಿರುತ್ತದೆ. ಒಂದನೇ ವಾದಿಯಾದ ಮಾದಿಗರ ಕುಡತಿನಿ ಹನುಮಪ್ಪ ಇವರು ಮೂಲತಹ ಕುಡತಿನಿ ಗ್ರಾಮದವರಾಗಿದ್ದು ಹಿರೇಹೆಗ್ಡಾಳ್ ಗ್ರಾಮದಲ್ಲಿ ವಾಸವಾಗಿರುತ್ತಾರೆ. ಸದರಿ ಜಮೀನು ವಾದಿಗಳಿಗೆ ಯಾವುದೇ ತರವಾದ ಸಂಬಂಧಪಟ್ಟ ಜಮೀನಾಗಿರುವುದಿಲ್ಲ ಹರಿಜನ ಹನುಮಂತಪ್ಪನು ಕುಡತಿನಿ ಹನುಮಪ್ಪನಾಗಿರುವುದಿಲ್ಲ ಸದರಿ ಜಮೀನು ವಾದಿಗಳ ಕುಟುಂಬದವರಿಗೆ

ಯಾವುದೇ ರೀತಿಯ ಸಂಬಂಧಪಟ್ಟಿರುವುದಿಲ್ಲ ಕಾರಣ ಸದರಿ ಪಾಲು ವಿಭಾಗದ ಪತ್ರ ಪ್ರಕಾರ ಅರ್ಜಿದಾರರ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ನಮ್ಮ ತಕರಾರು ಇರುವುದಾಗಿ ಕೋರಿರುತ್ತಾರೆ.

ದಿನಾಂಕ 27-07-2016 ರ ವಿಚಾರಣೆಯಲ್ಲಿ ಅರ್ಜಿದಾರರು ಹಾಜರಾಗಿದ್ದು ನಾವು ಸದರಿ ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆ ಮಾಡಲು ಅರ್ಜಿ ಸಲ್ಲಿಸಿರುವುದನ್ನು ವಾಪಸ್ಸು ಪಡೆದಿರುತ್ತೇನೆಂದು ಈಗ ಪಹಣಿಯಲ್ಲಿ ಯಥಾಸ್ಥಿತಿಯಂತೆ ಮಾಡಬೇಕೆಂದು ಕೋರಿ ಅರ್ಜಿ ಸಲ್ಲಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ಹೇಳಿಕೆ ಮತ್ತು ತಕರಾರುದಾರರ ಪರ ನ್ಯಾಯಾವಾದಿಗಳ ಹೇಳಿಕೆಗಳನ್ನು ಕೇಳಿ ಅರ್ಜಿದಾರರು ತಮ್ಮ ಅರ್ಜಿಯನ್ನು ವಾಪಸ್ಸು ಪಡೆದಿರುತ್ತೇನೆಂದು ಅರ್ಜಿ ಸಲ್ಲಿಸಿರುವ ಕಾರಣ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

## -:ಆದೇಶ:-

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಹಿರೇಹೆಗ್ಡಾಳ್ ಗ್ರಾಮದ ಸನಂ 5/ಎ. ವಿಸ್ತೀರ್ಣ 6-44. ಎಕ್ರೆ ಜಮೀನಿನ ಅರ್ಜಿದಾರರು ಹಕ್ಕು ಬದಲಾವಣೆಗೆ ಕೋರಿರುವ ಅರ್ಜಿಯನ್ನು ವಾಪಸ್ಸು ಪಡೆದಿರುತ್ತೇನೆಂದು ಕೋರಿ ಅರ್ಜಿ ಸಲ್ಲಿಸಿರುವ ಕಾರಣ ಯಥಾಸ್ಥಿತಿಯಂತೆ ಮುಂದುವರೆಸಲು ಆದೇಶಿಸಿ ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ಈ ಹಂತದಲ್ಲಿ ಮುಕ್ತಾಯಗೊಳಿಸಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 03-08-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ತಹಶೀಲ್ದಾರರು
ಕೂಡ್ಲಿಗಿ

ಇದರ ಪ್ರತಿಯನ್ನು:

1) ಅರ್ಜಿದಾರರಾದ ಕುಡತಿನಿ ಹನುಮಪ್ಪ ತಂದೆ ಲೇಟ್ ಬಸಪ್ಪ, ಬಸಮ್ಮ ಗಂಡ ಲೇಟ್ ಕುಡತಿನಿ ದುರುಗಪ್ಪ ಹಿರೇಹೆಗ್ಡಾಳ್ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ತಕರಾರುದಾರರಾದ ಬ್ಯಾಸ್ತೇರಿ ದುರುಗಪ್ಪ ತಾಯಿ ಪಕ್ಕೀರಮ್ಮ ಹಿರೇಹೆಗ್ಡಾಳ್ ಗ್ರಾಮ ಕೂಡ್ಲಿಗಿ ತಾಲೂಕು ಇವರ ಪರ ವಕೀಲರಾದ ಎ.ಶಿವರಾಜ್ ವಕೀಲರು ಕೂಡ್ಲಿಗಿ ಇವರ ದ್ವಾರ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕವೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.

ತಹಶೀಲ್ದಾರರ ಕಾರ್ಯಾಲಯ
ಕೂಡ್ಲಿಗಿ. ಬಳ್ಳಾರಿ ಜಿಲ್ಲೆ.

ದೃಢೀಕೃತ ನಕಲು

ಶಿರಸ್ತೇದಾರರು
ತಾಲೂಕು ಕಛೇರಿ
ಕೂಡ್ಲಿಗಿ.